ಕ್ರ.ಸಂ. 51, 149th.

**ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದಶ್ರೀ ಎಸ್.ವ್ಹಿ.ಸಂಕನೂರ (ಪದವೀಧರ ಕ್ಷೇತ್ರ) ಇವರು ಶೂನ್ಯ ವೇಳೆಯಲ್ಲಿ ಪ್ರಸ್ತಾಪಿಸಿರುವಪ್ರಸ್ತಾವನೆಗೆ ಉತ್ತರವನ್ನು ಒದಗಿಸುವ ಬಗ್ಗೆ**

ರಾಜ್ಯದ ಅನುದಾನಿತ ಶಿಕ್ಷಣ ಸಂಸ್ಥೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಸಿಬ್ಬಂದಿಯವರು ಪಿಂಚಣಿ ಸೌಲಭ್ಯ ಕಲ್ಪಿಸಬೇಕೆಂದು ಒತ್ತಾಯಿಸಿ ಸ್ವಾತಂತ್ರ್ಯ ಉದ್ಯಾನವನದಲ್ಲಿ ಭಿಕ್ಷಾಟನೆಗೆ ಮುಂದಾಗಿದ್ದ 50 ಜನ ನೌಕರರನ್ನು ಪೊಲೀಸರು ವಶಕ್ಕೆ ಪಡೆದುಕೊಂಡು ತದನಂತರ ಬಿಡುಗಡೆ ಮಾಡಿದ ವರದಿಯು ಪ್ರಜಾವಾಣಿ ಮತ್ತು ಮುಂತಾದ ಪತ್ರಿಕೆಗಳಲ್ಲಿ ವರದಿಯಾಗಿರುವುದು.

ರಾಜ್ಯದ ಅನುದಾನಿತ ಶಾಲಾ ಕಾಲೇಜುಗಳ ನೌಕರರು ಪಿಂಚಣಿ ವಂಚಿತರ ಸಂಘ ಕಳೆದ 138 ದಿನಗಳಿಂದ ಪ್ರತಿಭಟನೆ ನಡೆಸುತ್ತಾ ಬಂದಿರುವುದು ಸರ್ಕಾರಕ್ಕೆ ತಿಳಿದ ಸಂಗತಿಯಾಗಿರುತ್ತದೆ. ಈ ವಿಷಯಕ್ಕೆ ಸಂಬಂಧಿಸಿದಂತೆ ನೌಕರರ ಸಂಘಟನೆಯು ಸೋಮವಾರದಿಂದ 20.02.2023 ಅರೆಬೆತ್ತಲೆ ಅಮರಣಾಂತ ಉಪವಾಸ ಪ್ರಾರಂಭಿಸಿರುವರು, ಇದಲ್ಲದೆ ನೌಕರರ ಹೋರಾಟ ಉಗ್ರ ಸ್ವರೋಪಕ್ಕೆ ಬಂದು ಭಿಕ್ಷಾಟನೆ ಮಾಡಲು ಪ್ರಾರಂಭಿಸಿರುವುದು ವಿಷಾದಕರ ಸಂಗತಿಯಾಗಿದೆ. ಪೊಲೀಸರು ವಶಕ್ಕೆ ಪಡೆದ ನೌಕರರು ಇದಕ್ಕೆಲ್ಲಾ ನಾವು ಹೆದರುವುದಿಲ್ಲ, ಪಿಂಚಣಿ ಸಿಗುವವರೆಗೂ ಹೋರಾಟ ಮುಂದುವರೆಯಲಿದೆ ಎಂದು ಹೇಳಿಕೆ ನೀಡಿರುವರು. ಇದರ ಜೊತೆಗೆ ಉಪವಾಸ ನಿರತ ಇಬ್ಬರು ನೌಕರರು ನೆನ್ನೆಯ ದಿನ ಮಂಗಳವಾರ ಅಸ್ವಸ್ಥಗೊಂಡು ವೈದ್ಯರಿಂದ ಚಿಕಿತ್ಸೆ ಪಡೆಯುತ್ತಿದ್ದಾರೆ.

ಈ ಹಿನ್ನಲೆಯಲ್ಲಿ ಮಾನ್ಯ ಮುಖ್ಯಮಂತ್ರಿಗಳು ಅಮರಣಾಂತ ಉಪವಾಸ ಕೈಗೊಂಡಿರುವ ನೌಕರರ ಸಂಘಟನೆಯ ಪದಾಧಿಕಾರಿಗಳನ್ನು ಚರ್ಚೆಗೆ ಆಹ್ವಾನಿಸಿ, ನ್ಯಾಯಯುತ ಬೇಡಿಕೆಗಳನ್ನು ಈಡೇರಿಸಲು ಸೂಕ್ತ ಕ್ರಮ ಜರುಗಿಸಲು ಈ ಮೂಲಕ ಒತ್ತಾಯಿಸುತ್ತೇನೆ.

**ಉತ್ತರ**

ಅನುದಾನಿತ ಶಿಕ್ಷಣ ಸಂಸ್ಥೆಗಳ ನೌಕರರು ನಿಶ್ಚಿತ ಪಿಂಚಣಿ ಯೋಜನೆ ಹಾಗೂ ಇತರೇ ಬೇಡಿಕೆಗಳನ್ನು ಈಡೇರಿಸುವಂತೆ ಸ್ವಾತಂತ್ರ ಉದ್ಯಾನವನದಲ್ಲಿ ಧರಣಿ ನಡೆಸುತ್ತಿರುವ ಸಂಘಟನೆಗಳ ಪದಾಧಿಕಾರಿಗಳೊಂದಿಗೆ ಮಾನ್ಯ ಶಿಕ್ಷಣ ಸಚಿವರ ಅಧ್ಯಕ್ಷತೆಯಲ್ಲಿ ಮಾನ್ಯ ವಿಧಾನ ಪರಿಷತ್ತಿನ ಸದಸ್ಯರು ಹಾಗೂ ಮುಷ್ಕರ ನಿರತ ಸಂಘಟನೆಗಳ ಪ್ರತಿನಿಧಿಗಳನ್ನು ಒಳಗೊಂಡ ಸಭೆಯನ್ನು ದಿನಾಂಕ:20.01.2023 ರಂದು ಶಿಕ್ಷಕರ ಸದನದಲ್ಲಿ ನಡೆಸಲಾಗಿದ್ದು, ಸದರಿ ಸಭೆಯಲ್ಲಿ ಸ್ವಾತಂತ್ರ ಉದ್ಯಾನವನದಲ್ಲಿ ಧರಣಿ ನಿರತ ಸಂಘಟನೆಗಳ ಬೇಡಿಕೆಗಳ ಕುರಿತಾದ ರಾಷ್ಟ್ರೀಯ ಪಿಂಚಣಿ ಯೋಜನೆ (NPS) ಹಾಗೂ ಜ್ಯೋತಿ ಸಂಜೀವಿನಿ ಯೋಜನೆಯನ್ನು ಅನುಷ್ಠಾನಗೊಳಿಸುವ ಬಗ್ಗೆ ನಿಖರವಾದ ಮಾಹಿತಿಮತ್ತುದತ್ತಾಂಶಗಳನ್ನು ಕ್ರೋಢೀಕರಿಸಿ ಸರ್ಕಾರಕ್ಕೆತಗುಲಬಹುದಾದಆರ್ಥಿಕವೆಚ್ಚವನ್ನುಅಂದಾಜಿಸಿ ವರದಿ ಸಲ್ಲಿಸಲು ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ಸಮಿತಿಯನ್ನು ರಚಿಸಲಾಗಿರುತ್ತದೆ.

ಅನುದಾನಿತ ಶಾಲಾ / ಕಾಲೇಜು ಸಿಬ್ಬಂದಿಗಳ ಪಿಂಚಣಿ ಹಾಗೂ ಜ್ಯೋತಿ ಸಂಜೀವಿನಿ ಯೋಜನೆ ಕುರಿತಂತೆ ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ಸಭೆಯನ್ನು ನಡೆಸಲಾಗಿದ್ದು, ಸದರಿ ಸಭೆಯಲ್ಲಿ ದಿನಾಂಕ:01-04-2006 ನಂತರ ಅನುದಾನ ಸಹಿತ ಅನುಮೋದನೆಗೊಂಡಿರುವ ಖಾಸಗಿ ಅನುದಾನಿತ ಶಾಲಾ ಸಿಬ್ಬಂದಿಗಳಿಗೆ ನೂತನ ಪಿಂಚಣಿ ಯೋಜನೆಯ ಆಡಳಿತ ಮಂಡಳಿ (Employer) ವಂತಿಗೆಯನ್ನು ಸರ್ಕಾರವೇ ಭರಿಸಿದಲ್ಲಿ ಆಗುವ ವೆಚ್ಚದ ಲೆಕ್ಕಾಚಾರವನ್ನು ಹಾಗೂ ಅನುದಾನಿತ ಸಿಬ್ಬಂದಿಗಳಿಗೆ ಜ್ಯೋತಿ ಸಂಜೀವಿನಿ ಯೋಜನೆಯನ್ನು ಅನುಷ್ಠಾನಗೊಳಿಸುವ ಕುರಿತಂತೆ ಸರ್ಕಾರಕ್ಕೆ ತಗಲುವ ವೆಚ್ಚದ ವಿವರಗಳನ್ನು ಸಿದ್ಧಪಡಿಸಿ ಸಲ್ಲಿಸುವಂತೆ ಇಲಾಖಾ ಮುಖ್ಯಸ್ಥರಿಗೆ ತಿಳಿಸಲಾಗಿದ್ದು, ಸದರಿ ವರದಿಯನ್ನು ಪಡೆದು, ನಂತರ ನಿಯಮಾನುಸಾರ ಪರಿಶೀಲಿಸಿ ಕ್ರಮವಹಿಸಲಾಗುವುದು.

ಸಂಖ್ಯೆ:ಇಪಿ 105 ಎಸ್ಇಎಸ್ 2023

(ಬಿ.ಸಿ ನಾಗೇಶ್)
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ
ಸಕಾಲ ಸಚಿವರು